

ಸ್ವರ್ಣವಲ್ಲೀಯಲ್ಲಿ ಗಂಗಾಧರೇಂದ್ರ ಸರಸ್ವತೀ ಸ್ವಾಮೀಜಿ ಅವರಿಂದ ಸಾಧನಾ ಶಂಕರ ಪ್ರಶಸ್ತಿ ಸ್ವೀಕರಿಸಿದ ಡಾ.ಶಂಕರ ಭಟ್, ಲಲಿತಾ ಭಟ್ ದಂಪತಿ. ಶಿರಳಗಿ ಬ್ರಹ್ಮಾನಂದ ಭಾರತಿ ಸ್ವಾಮೀಜಿ ಇದ್ದರು



ಡಾ. ಕೃಷ್ಣಮೂರ್ತಿ ಕೂರ್ಸೆ ಅವರಿಗೆ ಸಾಧನಾ ಶಂಕರ ಪ್ರಶಸ್ತಿ ಪ್ರದಾನ ಮಾಡಲಾಯಿತು

## ಸ್ವರ್ಣವಲ್ಲೀ ಮಠದಲ್ಲಿ ನಡೆದ ಶಂಕರ ಜಯಂತಿ

# ಸಾಧನಾ ಶಂಕರ ಪ್ರಶಸ್ತಿ ಪ್ರದಾನ

ಪ್ರಜಾವಾಣಿ ವಾರ್ತೆ

ಶಿರಸಿ: ಸಂಸ್ಕೃತ ಕ್ಷೇತ್ರದಲ್ಲಿ ಸಾಧನೆ ಮಾಡಿರುವ ನಿವೃತ್ತ ಉಪನ್ಯಾಸಕರಿಗೆ ಸಾಧನಾ ಶಂಕರ ಪ್ರಶಸ್ತಿ ನೀಡಿ ಗೌರವಿಸುವ ಮೂಲಕ ಸ್ವರ್ಣವಲ್ಲೀಯಲ್ಲಿ ಶಂಕರ ಜಯಂತಿ ಆಚರಿಸಲಾಯಿತು.

ಸರ್ವಜ್ಞೇಂದ್ರ ಸರಸ್ವತಿ ಪ್ರತಿಷ್ಠಾನದ ವತಿಯಿಂದ ಮಂಗಳವಾರ ಸ್ವರ್ಣವಲ್ಲೀ ಮಠದಲ್ಲಿ ನಡೆದ ಕಾರ್ಯಕ್ರಮದಲ್ಲಿ ಇಲ್ಲಿನ ಸ್ವರ್ಣವಲ್ಲೀ ರಾಜರಾಜೇಶ್ವರಿ ಸಂಸ್ಕೃತ ಮಹಾವಿದ್ಯಾಲಯದ ನಿವೃತ್ತ ಪ್ರಾಧ್ಯಾಪಕ ಡಾ. ಶಂಕರ ಭಟ್ಟ ಬಾಲಿಗದ್ದೆ ಹಾಗೂ ಆದಿಚುಂಚನಗಿರಿ ಸಂಸ್ಕೃತ ಮಹಾವಿದ್ಯಾಲಯದ ನಿವೃತ್ತ ಪ್ರಾಚಾರ್ಯ ಡಾ. ಕೃಷ್ಣಮೂರ್ತಿ ಕೂರ್ಸೆ ಅವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದ ಸಾನ್ನಿಧ್ಯ ವಹಿಸಿದ್ದ ಸ್ವರ್ಣವಲ್ಲೀ ಗಂಗಾಧರೇಂದ್ರ ಸರಸ್ವತೀ ಸ್ವಾಮೀಜಿ ಮಾತನಾಡಿ, ಶಂಕರ ಭಗವತ್ಪಾದರು ನೀಡಿದ ಸಂದೇಶ ಇಂದಿನ ಕಾಲಘಟ್ಟದಲ್ಲಿ ಮಸುಕಾಗುತ್ತಿದೆ. ಹೀಗಾಗಿ ಸಮಾಜದಲ್ಲಿ ಅನರ್ಥಗಳು ಹೆಚ್ಚುತ್ತಿವೆ ಎಂದು ಹೇಳಿದರು.

ಬದುಕಿನ ಲಕ್ಷ್ಯವನ್ನು ತಿರುಗಿ ಅರ್ಥ ಮಾಡಿಕೊಳ್ಳುವಲ್ಲಿ ವಿಫಲರಾಗುತ್ತಿದ್ದೇವೆ. ಭೋಗೈಕ್ಯದ ದೃಷ್ಟಿ ಹೆಚ್ಚಿದೆ. ಇದು ದೂರ ಆಗಲು ಶಂಕರ ಚಿಂತನೆ ಉದ್ದೀಪಿಸಬೇಕು ಎಂದರು.

ಶಿರಳಗಿಯ ಬ್ರಹ್ಮಾನಂದ ಭಾರತೀ ಸ್ವಾಮೀಜಿ ಉಪನ್ಯಾಸ ನೀಡಿ, ಆಚಾರ್ಯರನ್ನು ಆರಾಧಿಸುವುದರಿಂದ ಅವರ ವಾಕ್ಯಗಳು ಜ್ಞಾನವನ್ನು ಹುಟ್ಟಿಸುತ್ತವೆ. ಆಚಾರ್ಯ ಉಪಾಸನೆ ಇಂದಿನ ಸಮಾಜದ ಅಗತ್ಯವಾಗಿದೆ ಎಂದರು.

ಕಲ್ಕತ್ತಾದ ವಿವೇಕಾನಂದ ವಿಶ್ವವಿದ್ಯಾಲಯದ ಸಹಾಯಕ ಪ್ರಾಧ್ಯಾಪಕ ಡಾ. ವೆಂಕಟ್ರಮಣ ಭಟ್ಟ ಹಲಸಖಂಡ, ಮಠದ ಆಡಳಿತ ಮಂಡಳಿ ಅಧ್ಯಕ್ಷ ವಿ.ಎನ್.ಹೆಗಡೆ ಇದ್ದರು.

ಕಾರ್ಯಕ್ರಮದ ಅಂಗವಾಗಿ ವಿವಿಧ ಧಾರ್ಮಿಕ ಕಾರ್ಯ, ಮಾತೆಯರಿಂದ ಶಂಕರ ಸ್ತೋತ್ರ ಪಾರಾಯಣ, ಯಕ್ಷ ಭಾರತಿ ಕಲಾ ವೇದಿಕೆಯಿಂದ ಶಂಕರ ದಿಗ್ವಿಜಯ ತಾಳಮದ್ದಲೆ ನಡೆಯಿತು.